"ELECTION URGENT"

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಸಂಖ್ಯೆ : ರಾಚುಆ: 171:ಇಜಿಪಿ:2010

ಕರ್ನಾಟಕ ರಾಜ್ಯ ಸಹಕಾರ ಮಾರಾಟ
ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ
ನಂ.8, ಕನ್ನಿಂಗ್ ಹ್ಯಾಂ ರಸ್ತೆ.
ಬೆಂಗಳೂರು–52,ದಿನಾಂಕ:30.11.2020

1) ಮುಖ್ಯ ಕಾರ್ಯದರ್ಶಿಗಳು
ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.

ಮಾನ್ಯರೆ,

ವಿಷಯ: ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆ–2020 ಸದಾಚಾರ ಸಂಹಿತೆ ಜಾರಿ ಬಗ್ಗೆ ಸೂಚನೆಗಳು.

ಉಲ್ಲೇಖ: ಆಯೋಗದ ಸಮ ಸಂಖ್ಯೆಯ ಆದೇಶ ದಿನಾಂಕ: 30.11.2020

0-0-0

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯ ಚುನಾವಣಾ ಆಯೋಗವು ರಾಜ್ಯದಲ್ಲಿ ಅವಧಿ ಮುಕ್ತಾಯವಾಗಿರುವ 5762 ಗ್ರಾಮ ಪಂಚಾಯಿತಿಗಳಿಗೆ ಸಾರ್ವತ್ರಿಕ ಚುನಾವಣೆಯನ್ನು ನಡೆಸಲು ವೇಳಾಪಟ್ಟಿಯನ್ನು ಪ್ರಕಟಿಸಿ ಆದೇಶಿಸಿದೆ. ಸದರಿ ಉಲ್ಲೇಖದ ಆದೇಶದ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ. ಚುನಾವಣಾ ವೇಳಾಪಟ್ಟಿಯು ಈ ಕೆಳಕಂಡಂತಿದೆ.

**ಎರಡು ಹಂತದಲ್ಲಿ ಚುನಾವಣೆ ನಡೆಯುವ ಗ್ರಾಮ ಪಂಚಾಯಿತಿಗಳ ಚುನಾವಣಾ ವೇಳಾ ಪಟ್ಟಿ**

| ಕ್ರ. ಸಂ. | ವಿವರ | ಮೊದಲನೆ ಹಂತದ ದಿನಾಂಕಗಳು | ಎರಡನೇ ಹಂತದ ದಿನಾಂಕಗಳು |
|---|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ. | 07.12.2020 (ಸೋಮವಾರ) | 11.12.2020 (ಶುಕ್ರವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ. | 11.12.2020 (ಶುಕ್ರವಾರ) | 16.12.2020 (ಬುಧವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ. | 12.12.2020 (ಶನಿವಾರ) | 17.12.2020 (ಗುರುವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ. | 14.12.2020 (ಸೋಮವಾರ) | 19.12.2020 (ಶನಿವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಮತದಾನದ ಸಮಯ **ಬೆಳಿಗ್ಗೆ 7.00** ಗಂಟೆಯಿಂದ **ಸಾಯಂಕಾಲ 5.00** ಗಂಟೆವರೆಗೆ). | 22.12.2020 (ಮಂಗಳವಾರ) | 27.12.2020 (ಭಾನುವಾರ) |
| 6 | ಮರು ಮತದಾನ ಇದ್ದಲ್ಲಿ ಮತದಾನದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ). | 24.12.2020 (ಗುರುವಾರ) | 29.12.2020 (ಮಂಗಳವಾರ) |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಗಂಟೆಯಿಂದ – ತಾಲ್ಲೂಕು ಕೇಂದ್ರಗಳಲ್ಲಿ). | 30.12.2020 (ಬುಧವಾರ) | 30.12.2020 (ಬುಧವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯ ಗೊಳಿಸಬೇಕೊ ಆ ದಿನಾಂಕ ಮತ್ತು ದಿನ. | 31.12.2020 (ಗುರುವಾರ) | 31.12.2020 (ಗುರುವಾರ) |

-2-

ಸದಾಚಾರ ಸಂಹಿತೆಯು ಚುನಾವಣೆ ನಡೆಯುವ ಎಲ್ಲಾ ಗ್ರಾಮಪಂಚಾಯಿತಿಗಳ ವ್ಯಾಪ್ತಿಯ ಪ್ರದೇಶಕ್ಕೆ ಮಾತ್ರ ಅನ್ವಯವಾಗುತ್ತದೆ. ಸದಾಚಾರ ಸಂಹಿತೆಯು ದಿನಾಂಕ 30.11.2020 ರಿಂದ ದಿನಾಂಕ: 31.12.2020 ರ ಸಂಜೆ 5-00 ಗಂಟೆಯವರೆಗೆ ಜಾರಿಯಲ್ಲಿರುತ್ತದೆ. ಸದಾಚಾರ ಸಂಹಿತಿಯು ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ, ನಗರಪಾಲಿಕೆ, ಮಹಾನಗರ ಪಾಲಿಕೆಗಳ ವ್ಯಾಪ್ತಿಯ ಪ್ರದೇಶಗಳಿಗೆ ಅನ್ವಯವಾಗುವುದಿಲ್ಲ.

ಮುಂದುವರೆದು, ಆಯೋಗವು "ಅಭ್ಯರ್ಥಿಗಳ ಮಾರ್ಗದರ್ಶನಕ್ಕಾಗಿ ಸದಾಚಾರ ಸಂಹಿತೆ" ಎಂಬ ಪುಸ್ತಕವೊಂದನ್ನು ಪ್ರಕಟಿಸಿದೆ. (ಪ್ರತಿ ಲಗತ್ತಿಸಿದೆ). ಸದಾಚಾರ ಸಂಹಿತೆಯು ಉಲ್ಲಂಘನೆಯಾಗದಂತೆ ನೋಡಿಕೊಳ್ಳಲು ಕೋರಲಾಗಿದೆ.

<u>ನೀತಿ ಸಂಹಿತೆಯ ಬಗ್ಗೆ ಈ ಕೆಳಕಂಡಂತೆ ಸ್ಪಷ್ಟೀಕರಣ ನೀಡಲಾಗಿದೆ.</u>

(1) ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳು ಸಾಮಾನ್ಯ ಸಭೆಯನ್ನು ನಡೆಸಲು ನೀತಿ ಸಂಹಿತೆಯು ಅಡ್ಡಿಯಿರುವುದಿಲ್ಲ. ಆದರೆ, ಸದರಿ ಸಭೆಯಲ್ಲಿ ಯಾವುದೇ ಹೊಸ ಯೋಜನೆಗಳ ಅನುಷ್ಠಾನದ ಬಗ್ಗೆ ತೀರ್ಮಾನ ತೆಗೆದುಕೊಳ್ಳತಕ್ಕದ್ದಲ್ಲ. ಈಗಾಗಲೇ ಆಯವ್ಯಯ ಒದಗಿಸಿರುವ ಯೋಜನೆಗಳನ್ನು ಪ್ರಾರಂಭಿಸಲು ಅಥವಾ ಪ್ರಾರಂಭವಾಗಿದ್ದಲ್ಲಿ ಕೆಲಸ ಮುಂದುವರಿಸಲು ಯಾವುದೇ ಬಾಧಕವಿಲ್ಲ.

(2) ಬರಪೀಡಿತ ಪ್ರದೇಶಗಳಲ್ಲಿ ಕುಡಿಯುವ ನೀರಿನ ಅಥವಾ ಈ ಯೋಜನೆಯಡಿ ಇತರ ಕಾಮಗಾರಿಗಳನ್ನು ತೆಗೆದುಕೊಂಡು ಅನುಷ್ಠಾನಗೊಳಿಸಲು ನೀತಿ ಸಂಹಿತೆಯ ಅಡ್ಡಿಯಿರುವುದಿಲ್ಲ. ಆದರೆ ಇಂತಹ ಯೋಜನೆಯ ಅನುಷ್ಠಾನವನ್ನು ಸಾರ್ವಜನಿಕ ಸಮಾರಂಭ ಅಥವಾ ರಾಜಕೀಯ ನಾಯಕರುಗಳ ಉಪಸ್ಥಿತಿಯಲ್ಲಿ ನಡೆಸುವುದನ್ನು ನಿಷೇದಿಸಲಾಗಿದೆ.

(3) ನೆರೆಪೀಡಿತ ಹಾಗೂ ಪ್ರಕೃತಿ ವಿಕೋಪ ಪೀಡಿತ ಜನ ಸಮುದಾಯಕ್ಕೆ ನೀಡಲಾಗುವ ಯಾವುದೇ ಪರಿಹಾರ, ಅಥವಾ ಸೌಲಭ್ಯಗಳಿಗೆ ನೀತಿ ಸಂಹಿತೆಯು ಅಡ್ಡಿಯಾಗುವುದಿಲ್ಲ.

(4) ಗ್ರಾಮ ಪಂಚಾಯತಿ ಚುನಾವಣೆಗಳು ಪಕ್ಷರಹಿತವಾಗಿ ನಡೆಯುವುದರಿಂದ ರಾಜಕೀಯ ಪಕ್ಷಗಳ ಚಿಹ್ನೆಗಳನ್ನು ಮತ್ತು ರಾಜಕೀಯ ಮುಖಂಡರ ಭಾವಚಿತ್ರಗಳನ್ನು ಉಪಯೋಗಿಸಿ ಪ್ರಚಾರ ಮಾಡಕೂಡದೆಂದು ಅಭ್ಯರ್ಥಿಗಳಿಗೆ ತಿಳಿಸುವುದು. ಒಂದು ವೇಳೆ ಅಂತಹ ಪ್ರಚಾರ ನಡೆಸಿದಲ್ಲಿ ಅಭ್ಯರ್ಥಿಯು ಮುದ್ರಿಸಿರುವ ಕರಪತ್ರ, ಪೋಸ್ಟರ್ ಅಥವಾ ಇನ್ಯಾವುದೇ ಪ್ರಚಾರ ಸಾಮಗ್ರಿಗಳನ್ನು ಮುಟ್ಟುಗೋಲು ಹಾಕಿಕೊಳ್ಳುವುದು.

(5) ಯಾವುದೇ ಸಾಂಸ್ಕೃತಿಕ ಹಾಗೂ ಧಾರ್ಮಿಕ ಸಭೆ ಮತ್ತು ಸಾಮಾರಂಭಗಳನ್ನು ನಡೆಸಲು ನೀತಿ ಸಂಹಿತೆಯು ಅಡ್ಡಿಯಿಲ್ಲ. ಆದರೆ ಇಂತಹ ಸಭೆ ಸಮಾರಂಭಗಳಲ್ಲಿ ರಾಜಕೀಯ ವ್ಯಕ್ತಿಗಳು ಭಾಗವಹಿಸಿ ನೀತಿ ಸಂಹಿತೆಗೆ ಭಾದಕವಾಗುವ ರೀತಿಯಲ್ಲಿ ಮತದಾರರ ಮೇಲೆ ಪರಿಣಾಮ ಬೀರುವಂತಹ ಯಾವುದೇ ಘೋಷಣೆ, ಹೇಳಿಕೆ ಅಥವಾ ಆಶ್ವಾಸನೆ ಇತ್ಯಾದಿಗಳನ್ನು ಮಾಡುವಂತಿಲ್ಲ.

(6) ವಿಧಾನಮಂಡಲ ಮತ್ತು ಸಂಸತ್ ಸದಸ್ಯರುಗಳಿಗೆ ಜಿಲ್ಲಾ ಮಟ್ಟದಲ್ಲಿ ಅಥವಾ ತಾಲ್ಲೂಕು ಮಟ್ಟದಲ್ಲಿ ಅವರ ಸಾಮಾನ್ಯ ಕರ್ತವ್ಯ ನಿರ್ವಹಣೆಗೆ ಒದಗಿಸಲಾಗಿರುವ ವಾಹನವನ್ನು ಜಿಲ್ಲಾಧಿಕಾರಿಗಳು ವಶಕ್ಕೆ ತೆಗೆದುಕೊಳ್ಳುವ ಅಗತ್ಯವಿರುವುದಿಲ್ಲ. ಆದರೆ ಚುನಾವಣಾ ಪ್ರಚಾರಗಳಿಗೆ ಅಥವಾ ಚುನಾವಣಾ ಸಂಬಂಧದ ಸಭೆಗಳನ್ನು ನಡೆಸಲು ಸರ್ಕಾರಿ ವಾಹನಗಳನ್ನು ಅವರು ಬಳಸಿದಲ್ಲಿ ಅವುಗಳನ್ನು ತಕ್ಷಣ ವಶಪಡಿಸಿಕೊಳ್ಳತಕ್ಕದ್ದು.

(7) ಯಾವುದೇ ನೇಮಕಾತಿ ಪ್ರಕ್ರಿಯೆಯು ಈಗಾಗಲೇ ಪ್ರಾರಂಭಗೊಂಡಿದ್ದರೆ ಅದನ್ನು ನಿಲ್ಲಿಸುವ ಅಗತ್ಯವಿರುವುದಿಲ್ಲ. ಆದರೆ ನೇಮಕಾತಿಯನ್ನು ಈ ಸಮಯದಲ್ಲಿ ಅಂತಿಮಗೊಳಿಸಿ ನೇಮಕಾತಿ ಆಯ್ಕೆ ಪಟ್ಟಿ ಪ್ರಕಟಗೊಳಿಸಬಾರದು.

(8) ಒಟ್ಟಿನಲ್ಲಿ **<u>"ಮತದಾರರ ಮೇಲೆ ಪ್ರಭಾವ"</u>** ಬೀರುವಂತಹ ಯಾವುದೇ ಸರ್ಕಾರಿ ಕಾರ್ಯಕ್ರಮ ಅಥವಾ ಯೋಜನೆಯು ನಡೆಯದಂತೆ ನೋಡಿಕೊಳ್ಳತಕ್ಕದ್ದು.

(9) ಜಿಲ್ಲಾ ಮಟ್ಟದಲ್ಲಿ/ತಾಲ್ಲೂಕು ಮಟ್ಟದಲ್ಲಿ ಪಡಿತರ ಚೀಟಿ ವಿತರಣೆ, ಗ್ರಾಮೀಣ ಭಾಗಗಳಿಗೆ ಯಾವುದೇ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನದಂತಹ ವಿಷಯಗಳಲ್ಲಿ ತೀರ್ಮಾನ ತೆಗೆದುಕೊಳ್ಳುವ ಸಭೆಗಳನ್ನು ಸಚಿವರು/ಶಾಸಕರು ಮತ್ತು ಅಧಿಕಾರಿಗಳು ನಡೆಸುವುದು ನೀತಿ ಸಂಹಿತೆಯ ಉಲ್ಲಂಘನೆಯಾಗುತ್ತದೆ.

-3-

(10) ಯಾವುದೇ ತಾತ್ಕಾಲಿಕ ಹುದ್ದೆಗಳಿಗೆ ನೇಮಕಾತಿ ಮಾಡಲು ಅವಕಾಶವಿರುವುದಿಲ್ಲ. ಆದರೆ ಯಾವುದಾದರೂ ತುರ್ತು ಸೇವೆಗೆ ನೇಮಕಾತಿ ಅವಶ್ಯಕವಿದ್ದಲ್ಲಿ ಆಯೋಗದ ಅನುಮೋದನೆ ಪಡೆದು ನೇಮಕಾತಿ ಮಾಡಬಹುದು.

(11) ಯಾವುದೇ ಇಲಾಖೆಯಲ್ಲಿ ಸಾಮಾನ್ಯ ಮುಂಬಡ್ತಿಯನ್ನು ನೀಡಲು ಯಾವುದೇ ಬಾಧಕವಿರುವುದಿಲ್ಲ.

(12) ಚುನಾವಣೆಗಳಿಗೆ ನಿಯೋಜಿಸಿದ ಯಾವುದೇ ಸಿಬ್ಬಂದಿಯ ವರ್ಗಾವಣೆಯನ್ನು ಮಾಡುವಂತಿಲ್ಲ.

(13) ನೀತಿ ಸಂಹಿತೆ ಜಾರಿಯಲ್ಲಿರುವ ಅವಧಿಯಲ್ಲಿ "ಜನ ಸ್ಪಂದನ ಸಭೆ" ನಡೆಸುವಂತಿಲ್ಲ.

(14) ಭೂನ್ಯಾಯಮಂಡಳಿ ಸಮಿತಿ ಸಭೆಗಳನ್ನು (ಟ್ರಿಬ್ಯೂನಲ್) ನೀತಿ ಸಂಹಿತೆ ಜಾರಿಯಲ್ಲಿರುವ ಅವಧಿಯಲ್ಲಿ ನಡೆಸುವಂತಿಲ್ಲ.

(15) ಮಂತ್ರಿಗಳು ಅಥವಾ ಶಾಸಕರ ಅಧ್ಯಕ್ಷತೆಯಲ್ಲಿ ಕೆ.ಡಿ.ಪಿ ಸಭೆ ಮತ್ತು ಇತರ ಸಭೆಗಳನ್ನು ನೀತಿ ಸಂಹಿತೆ ಜಾರಿಯಲ್ಲಿರುವ ಅವಧಿಯಲ್ಲಿ ನಡೆಸುವಂತಿಲ್ಲ.

(16) ಪಂಚಾಯಿತಿಗಳು ಚುನಾವಣಾ ಪೂರ್ವದಲ್ಲಿ ಪ್ರಾರಂಭಿಸಿರುವ/ ಜಾರಿಯಲ್ಲಿರುವ ಕಾಮಗಾರಿಗಳ ಸಂಬಂಧ ಪಂಚಾಯಿತಿಯು ಹಣವನ್ನು ಪಾವತಿ ಮಾಡಲು ನೀತಿ ಸಂಹಿತೆ ಅಡ್ಡಿಯಿರುವುದಿಲ್ಲ. ಆದರೆ ಪಂಚಾಯಿತಿಗಳು ಯಾವುದೇ ಹೊಸ ಕಾಮಗಾರಿಗಳನ್ನು ನಿರ್ಧರಿಸಲಾಗಿದೆ ಎಂಬ ಕಾರಣನೀಡಿ ಪ್ರಾರಂಭಿಸುವಂತಿಲ್ಲ.

(17) ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರುಗಳಿಗೆ ಹಾಗೂ ಎಪಿಎಂಸಿ ಅಧ್ಯಕ್ಷರಿಗೆ ಒದಗಿಸಲಾಗಿರುವ ಸರ್ಕಾರಿ ವಾಹನಗಳನ್ನು ಚುನಾವಣೆ ಮುಕ್ತಾಯವಾಗುವವರೆಗೆ ಜಿಲ್ಲಾಧಿಕಾರಿಗಳ ವಶದಲ್ಲಿರಿಸಿಕೊಳ್ಳತಕ್ಕದ್ದು.

(18) ಗ್ರಾಮೀಣ ಪ್ರದೇಶದಲ್ಲಿ ಮಂತ್ರಿಗಳು ಅಥವಾ ಶಾಸಕರು ಯಾವುದೇ ಕಾರ್ಯಕ್ರಮವನ್ನು ಆಯೋಜಿಸಿ ಮತದಾರರನ್ನು ಪ್ರಭಾವಿಸುವಂತಹ ಸಮಾರಂಭಗಳನ್ನು ನಡೆಸುವುದನ್ನು ನಿಷೇಧಿಸಲಾಗಿದೆ.

(19) ಜಿಲ್ಲಾಮಟ್ಟದಲ್ಲಿ ಮತ್ತು ತಾಲ್ಲೂಕು ಮಟ್ಟದಲ್ಲಿ ಸದಾಚಾರ ಸಂಹಿತೆಯನ್ನು ಜಾರಿಗೊಳಿಸುವ ಅಧಿಕಾರವು ಜಿಲ್ಲಾಧಿಕಾರಿಗಳವರಿಗೆ ನಿಹಿತವಾಗಿದ್ದು ಸದಾಚಾರ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸತಕ್ಕದ್ದು.

(20) ಚುನಾವಣಾ ಅಭ್ಯರ್ಥಿಗಳ ಪ್ರಚಾರದ ಸಂಬಂಧ ಚುನಾವಣೆ ನಡೆಯುವ ಗ್ರಾಮಪಂಚಾಯಿತಿಗಳ ವ್ಯಾಪ್ತಿಯಲ್ಲಿ ಅನಧಿಕೃತ ಪೋಸ್ಟರ್‌ಗಳು, ಬ್ಯಾನರ್‌ಗಳು ಇರದಂತೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕ್ರಮವಹಿಸುವುದು.

(21) ಸರ್ಕಾರಿ ವಾಹನಗಳು ದುರಪಯೋಗವಾಗದಂತೆ, ತಾಲ್ಲೂಕು ತಹಶೀಲ್ದಾರರು, ಉಪವಿಭಾಗಾಧಿಕಾರಿಗಳು ಮತ್ತು ಜಿಲ್ಲಾ ಮಟ್ಟದ/ತಾಲ್ಲೂಕು ಮಟ್ಟದ ಅಧಿಕಾರಿಗಳು ಸರ್ಕಾರಿ/ಅರೆಸರ್ಕಾರಿ ಕಛೇರಿ, ಬೋರ್ಡುಗಳು/ಎ.ಪಿ.ಎಂ.ಸಿ ಮುಂತಾದ ಕಛೇರಿ ಮುಖ್ಯಸ್ಥರಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡುವುದು.

ತಮ್ಮ ವಿಶ್ವಾಸಿ.

(ಆಯುಕ್ತರಿಂದ ಅನುಮೋದಿಸಿದೆ)

30/11/2020

ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ

**ಪ್ರತಿಯನ್ನು ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ ಈ ಕೆಳಕಂಡವರಿಗೆ ಕಳುಹಿಸಿದೆ:**

1. ಎಲ್ಲಾ ಜಿಲ್ಲಾಧಿಕಾರಿಗಳು.
2. ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು.
3. ಎಲ್ಲಾ ಸಚಿವರುಗಳ ಆಪ್ತ ಕಾರ್ಯದರ್ಶಿಗಳಿಗೆ.